ಇಲಾಖೆ / ವಿಷಯ : DEPARTMENT / SUBJECT: ಶಿಕ್ಷಣ

ಪತ್ರಿಕೆಯ ಹೆಸರು : NAME OF THE NEWS PAPER: ಉದಯವಾಣಿ    ದಿನಾಂಕ : DATE : 3/7/2020

# 1-5ನೇ ತರಗತಿಗೆ ಪರ್ಯಾಯ ಶೈಕ್ಷಣಿಕ ಕ್ಯಾಲೆಂಡರ್ ಬಿಡುಗಡೆ

ನವದೆಹಲಿ: ಕೊರೊನಾ ಲಾಕ್‌ಡೌನ್ ಅವಧಿಯಲ್ಲಿ ಮಕ್ಕಳಿಗೆ ಮನೆಗಳಲ್ಲೇ ಪರ್ಯಾಯ ಕಲಿಕಾ ವಿಧಾನವನ್ನು ಪರಿಚಯಿಸುವ ಸಲುವಾಗಿ ರಾಷ್ಟ್ರೀಯ ಶೈಕ್ಷಣಿಕ ಸಂಶೋಧನೆ ಮತ್ತು ತರಬೇತಿ ಮಂಡಳಿ (ಎನ್‌ಸಿಇಆರ್‌ಟಿ) ಗುರುವಾರ ಪರ್ಯಾಯ ಶೈಕ್ಷಣಿಕ ಕ್ಯಾಲೆಂಡರ್ ಅನ್ನು ಬಿಡುಗಡೆ ಮಾಡಿದೆ. ಕೇಂದ್ರ ಮಾನವ ಸಂಪನ್ಮೂಲ ಅಭಿವೃದ್ಧಿ ಸಚಿವ ರಮೇಶ್ ಪೋಖ್ರಿಯಾಲ್ ನಿಶಾಂಕ್ ಅವರು 1ರಿಂದ 5ನೇ ತರಗತಿಯ ಮಕ್ಕಳಿಗೆಂದು 8 ವಾರಗಳ ಈ ಕ್ಯಾಲೆಂಡರ್ ಬಿಡುಗಡೆ ಮಾಡಿದ್ದಾರೆ.



ಮನೆಗಳಲ್ಲೇ ಇರುವ ಮಕ್ಕಳಿಗೆ ಶಿಕ್ಷಣ ನೀಡಲು ಶಿಕ್ಷಕರು ತಂತ್ರಜ್ಞಾನಗಳು ಹಾಗೂ ಸಾಮಾಜಿಕ ಮಾಧ್ಯಮಗಳನ್ನು ಹೇಗೆ ಬಳಸಿಕೊಳ್ಳಬೇಕು ಎಂಬ ವಿಸ್ತೃತ ಮಾರ್ಗಸೂಚಿಯನ್ನು ಈ ಪರ್ಯಾಯ ಕ್ಯಾಲೆಂಡರ್ ಒಳಗೊಂಡಿದೆ. ಇದೇ ರೀತಿ, ಶಾಲಾ ಶಿಕ್ಷಣದ ಎಲ್ಲ ಹಂತಗಳಿಗೂ ಅನ್ವಯವಾಗುವಂತೆ ಪರ್ಯಾಯ ಶೈಕ್ಷಣಿಕ ಕ್ಯಾಲೆಂಡರ್ ಅನ್ನು ಎನ್‌ಸಿಇಆರ್‌ಟಿ ಅಭಿವೃದ್ಧಿಪಡಿಸಿದೆ.

## ನೀಟ್, ಜೆಇಇ ಬಗ್ಗೆ ಪರಿಶೀಲನೆ

ಕೊರೊನಾ ಸೋಂಕಿನ ಪ್ರಕರಣಗಳು ಹೆಚ್ಚುತ್ತಿರುವ ಕಾರಣ ನೀಟ್, ಜೆಇಇಯಂತಹ ವೈದ್ಯಕೀಯ ಮತ್ತು ಎಂಜಿನಿಯರಿಂಗ್ ಪ್ರವೇಶ ಪರೀಕ್ಷೆಗಳನ್ನು ನಡೆಸುವುದು ಸೂಕ್ತವೋ, ಅಲ್ಲವೋ ಎಂಬ ಬಗ್ಗೆ ರಾಷ್ಟ್ರೀಯ ಪರೀಕ್ಷಾ ಸಂಸ್ಥೆ (ಎನ್‌ಟಿಎ)ಯ ಅಧಿಕಾರಿಗಳು ಮತ್ತು ಇತರೆ ತಜ್ಞರನ್ನು ಒಳಗೊಂಡ ಸಮಿತಿಯು ಪರಿಶೀಲನೆ ನಡೆಸಿ ನಿರ್ಧಾರ ಕೈಗೊಳ್ಳಲಿದೆ ಎಂದು ಸಚಿವ ರಮೇಶ್ ಪೋಖ್ರಿಯಾಲ್ ನಿಶಾಂಕ್ ಹೇಳಿದ್ದಾರೆ. ಜುಲೈನಲ್ಲಿ ಪರೀಕ್ಷೆ ನಡೆಸುವುದಕ್ಕೆ ವಿದ್ಯಾರ್ಥಿಗಳು ಮತ್ತು ಹೆತ್ತವರು ಕಳವಳ ವ್ಯಕ್ತಪಡಿಸಿರುವ ಹಿನ್ನೆಲೆಯಲ್ಲಿ ಅವರು ಈ ಸ್ಪಷ್ಟನೆ ನೀಡಿದ್ದಾರೆ.